ತಾವು ಇದನ್ನು SR WORLD ಟೆಲಿಗ್ರಾಂ ಗ್ರೂಪ್ ನಿಂದ ಪಡೆದಿರುವಿರಿ. ಈಗಾಗಲೇ ಆ ಗ್ರೂಪ್ ನಲ್ಲಿ 2,50,000 ದಷ್ಟು ಸ್ಪರ್ಧಾರ್ಥಿಗಳು JOIN ಆಗಿದ್ದಾರೆ. ನೀವೂ JOIN ಆಗಿ, ಗ್ರೂಪ್ ಲಿಂಕ್ ಗಾಗಿ 9538781570ಗೆ ವಾಟ್ಸಾಪ್/ಟೆಲಿಗ್ರಾಂ ಮಾಡಿ.

**ಸಮಾಜ ಕಲ್ಯಾಣ ಇಲಾಖೆ**

# ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ವಿವಿಧ ಸೌಲಭ್ಯಗಳು



**ಶ್ರೀ ಬಸವರಾಜ ಎಸ್. ಬೊಮ್ಮಾಯಿ**
ಸನ್ಮಾನ್ಯ ಮುಖ್ಯಮಂತ್ರಿಗಳು



ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಸಚಿವರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ ಅವರು ಇಲಾಖೆಯ ಕಾರ್ಯಕ್ರಮವನ್ನು ಉದ್ಘಾಟಿಸುತ್ತಿರುವುದು.

## ವಿದ್ಯಾರ್ಥಿವೇತನ ಕಾರ್ಯಕ್ರಮ

2021-22ನೇ ಸಾಲಿನಲ್ಲಿ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಅರ್ಹ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

**Website ವಿವರ**

ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ:
https://ssp.karnataka.gov.in/homepage.aspx

ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ:
https://ssp.postmatric.karnataka.gov.in/

## FREESHIP CARD

ಭಾರತ ಸರ್ಕಾರ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಮಾರ್ಗಸೂಚಿ (2021)ರನ್ವಯ 2021-22ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ **FREESHIP CARD** ವ್ಯವಸ್ಥೆಯನ್ನು ಜಾರಿಗೆ ತಂದಿದ್ದು, ಅರ್ಹ ವಿದ್ಯಾರ್ಥಿಗಳು ಕಾಲೇಜುಗಳಿಗೆ ಪ್ರವೇಶದ ಸಮಯದಲ್ಲಿ ಯಾವುದೇ ಶುಲ್ಕಗಳನ್ನು ಪಾವತಿಸುವಂತಿಲ್ಲ.

**FREESHIP CARD** ಸೌಲಭ್ಯ ಪಡೆಯಲು ವಿದ್ಯಾರ್ಥಿಗಳು ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ Student Loginನಲ್ಲಿ ನೋಂದಣಿಯಾಗುವುದು.

## ಪ್ರೋತ್ಸಾಹಧನ ಕಾರ್ಯಕ್ರಮ

**ಎಸ್.ಎಸ್.ಎಲ್.ಸಿ. ಪ್ರೋತ್ಸಾಹಧನ:**

2019-20 ಮತ್ತು 2020-21ನೇ ಶೈಕ್ಷಣಿಕ ಸಾಲಿನಲ್ಲಿ CBSE & ICSE ಶಾಲೆಗಳಲ್ಲಿ 10ನೇ ತರಗತಿ ವಾರ್ಷಿಕ ಪರೀಕ್ಷೆಯಲ್ಲಿ ಶೇ. 60ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪ್ರೋತ್ಸಾಹಧನ ಪಡೆಯಲು ಇಲಾಖೆಯ ಜಿಲ್ಲಾ/ತಾಲ್ಲೂಕು ಮಟ್ಟದ ಕಛೇರಿಗೆ ಭೇಟಿ ನೀಡಿ ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಆಧಾರ್ ಕಾರ್ಡ್ ಮತ್ತು ಬ್ಯಾಂಕ್ ಪಾಸ್‌ಪುಸ್ತಕದ ಪ್ರತಿಯನ್ನು ಸಲ್ಲಿಸುವುದು.

**(SSLC State Boardನ ವಿದ್ಯಾರ್ಥಿಗಳಿಗೆ ನೇರವಾಗಿ ಪ್ರೋತ್ಸಾಹಧನವನ್ನು ಪಾವತಿಸುವ ಕಾರಣ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.)**

**ಮೆಟ್ರಿಕ್ ನಂತರದ ಪ್ರೋತ್ಸಾಹಧನ:**

12ನೇ ತರಗತಿ, ಪದವಿ, ಸ್ನಾತಕೋತ್ತರ ಪದವಿ ಹಾಗೂ ಕೃಷಿ, ತಾಂತ್ರಿಕ, ಪಶುವೈದ್ಯ ಮತ್ತು ವೈದ್ಯಕೀಯ ಕೋರ್ಸುಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

**Website ವಿವರ**

https://sw.kar.nic.in/swprizemoney/Home.aspx

(ವಿದ್ಯಾರ್ಥಿಗಳು ಕಡ್ಡಾಯವಾಗಿ ತಮ್ಮ ಬ್ಯಾಂಕ್ ಖಾತೆಯನ್ನು ಆಧಾರ್‌ನೊಂದಿಗೆ ಜೋಡಣೆ ಮಾಡಿಸತಕ್ಕದ್ದು)

## ವಿದ್ಯಾರ್ಥಿನಿಲಯಗಳಿಗೆ ಪ್ರವೇಶಾವಕಾಶ

2021-22ನೇ ಸಾಲಿನಲ್ಲಿ ಇಲಾಖಾ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಾವಕಾಶ ಕಲ್ಪಿಸಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

**Website ವಿವರ**

https://sw.kar.nic.in/hosteladmissions/

## ಪ್ರತಿಷ್ಠಿತ ಶಾಲೆಗಳಲ್ಲಿ ಪ್ರವೇಶಾವಕಾಶ

2021-22ನೇ ಸಾಲಿನಲ್ಲಿ ಪ್ರತಿಭಾನ್ವಿತ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪ್ರತಿಷ್ಠಿತ ಶಾಲೆಗಳಲ್ಲಿ 6ನೇ ತರಗತಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಜಿಲ್ಲಾ ಅಥವಾ ತಾಲ್ಲೂಕು ಮಟ್ಟದ ಅಧಿಕಾರಿಗಳ ಕಛೇರಿಯನ್ನು ಸಂಪರ್ಕಿಸುವುದು.

ಕಡ್ಡಾಯವಾಗಿ ಮಾಸ್ಕ್ ಧರಿಸಿ | ಕೈಗಳ ಸ್ವಚ್ಛತೆಯನ್ನು ಕಾಪಾಡಿಕೊಳ್ಳಿ | ದೈಹಿಕ ಅಂತರವನ್ನು ಪಾಲಿಸಿ

| | | |
|---|---|---|
| **ಪಿ.ಎಸ್. ಕಾಂತರಾಜು** ಕ.ಆ.ಸೇ.<br>ನಿರ್ದೇಶಕರು<br>ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ | **ಡಾ. ರವಿ ಕುಮಾರ್ ಸುರಪುರ,** ಭಾ.ಆ.ಸೇ.<br>ಆಯುಕ್ತರು<br>ಸಮಾಜ ಕಲ್ಯಾಣ ಇಲಾಖೆ | **ಡಾ. ಎನ್. ನಾಗಾಂಬಿಕಾ ದೇವಿ,** ಭಾ.ಆ.ಸೇ.<br>ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು<br>ಸಮಾಜ ಕಲ್ಯಾಣ ಇಲಾಖೆ |